**Akashvani : Bangalore**
**National Bulletins In Kannada**
**04.09.2025 / 19.35 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**04.09.2025 / 19.35 pm**

**<><*<><>*><>**

ಮುಖ್ಯಾಂಶಗಳು

೧. ನಾಗರಿಕ ವಿಮಾನಯಾನ, ಬಾಹ್ಯಾಕಾಶ ಸೇರಿದಂತೆ ಐದು ಒಪ್ಪಂದಗಳಿಗೆ ಭಾರತ-ಸಿಂಗಾಪುರ ಸಹಿ

೨. ಪಂಜಾಬ್‌ನ ಪ್ರವಾಹ ಪೀಡಿತ ಪ್ರದೇಶಗಳಿಗೆ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಭೇಟಿ

೩. ಆಗಸ್ಟ್‌ನಲ್ಲಿ ೨೨೧ ಕೋಟಿಗೂ ಹೆಚ್ಚು ಆಧಾರ್ ದೃಢೀಕರಣ ವಹಿವಾಟು ದಾಖಲು

೪. ಇಂಗ್ಲೆಂಡ್‌ನ ಲಿವರ್‌ಪೂಲ್‌ನಲ್ಲಿ ಇಂದಿನಿಂದ ವಿಶ್ವ ಬಾಕ್ಸಿಂಗ್ ಚಾಂಪಿಯನ್‌ಶಿಪ್ ಆರಂಭ

><><><*><><><

ನಾಗರಿಕ ವಿಮಾನಯಾನ, ಬಾಹ್ಯಾಕಾಶ, ಕೌಶಲ್ಯ ಅಭಿವೃದ್ಧಿ, ಡಿಜಿಟಲ್ ಆಸ್ತಿ ನಾವೀನ್ಯತೆ ಹಾಗೂ ಹಸಿರು ಮತ್ತು ಡಿಜಿಟಲ್ ಶಿಪ್ಪಿಂಗ್ ಕಾರಿಡಾರ್ ಕುರಿತು ಭಾರತ ಮತ್ತು ಸಿಂಗಾಪುರ ಇಂದು ಐದು ಒಪ್ಪಂದಗಳಿಗೆ ಸಹಿ ಹಾಕಿವೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಸಿಂಗಾಪುರ ಪ್ರಧಾನಿ ಲಾರೆನ್ಸ್ ವಾಂಗ್ ನಡುವೆ ನವದೆಹಲಿಯಲ್ಲಿ ಇಂದು ನಡೆದ ದ್ವಿಪಕ್ಷೀಯ ಮಾತುಕತೆಯ ನಂತರ ಈ ಒಪ್ಪಂದಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು. ಮಾತುಕತೆಯ ನಂತರ ನಡೆದ ಜಂಟಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಆಸಿಯಾನ್ ಜೊತೆಗಿನ ಸಹಕಾರ ಮತ್ತು ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಗಾಗಿ ಜಂಟಿ ದೃಷ್ಟಿಕೋನವನ್ನು ಮುನ್ನಡೆಸಲು ಭಾರತ ಮತ್ತು ಸಿಂಗಾಪುರ ಒಟ್ಟಾಗಿ ಕೆಲಸ ಮಾಡುವುದನ್ನು ಮುಂದುವರಿಸುತ್ತವೆ ಎಂದು ತಿಳಿಸಿದರು. ಸಿಂಗಾಪುರವು ಆಗ್ನೇಯ ಏಷ್ಯಾದಲ್ಲಿ ಭಾರತದ ಅತಿದೊಡ್ಡ ವ್ಯಾಪಾರ ಪಾಲುದಾರ ಮತ್ತು ಇದು ಆಕ್ಟ್ ಈಸ್ಟ್ ನೀತಿಯ ಪ್ರಮುಖ ಸ್ತಂಭವಾಗಿದೆ. ತಂತ್ರಜ್ಞಾನ ಮತ್ತು ನಾವೀನ್ಯತೆ ಪಾಲುದಾರಿಕೆಯ ಬಲವಾದ ಸ್ತಂಭಗಳಾಗಿವೆ. ಕೃತಕ ಬುದ್ಧಿಮತ್ತೆ, ಕ್ವಾಂಟಮ್ ಮತ್ತು ಇತರೆ ಡಿಜಿಟಲ್ ತಂತ್ರಜ್ಞಾನಗಳಲ್ಲಿ ಸಹಕಾರವನ್ನು ಹೆಚ್ಚಿಸಲು ಉಭಯ ದೇಶಗಳು ನಿರ್ಧರಿಸಿವೆ ಎಂದು ಹೇಳಿದರು.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ ( 23 ಸೆಕೆಂಡುಗಳು)**

ಶಿಪ್ಪಿಂಗ್, ಕೌಶಲ್ಯ, ನಾಗರಿಕ ಪರಮಾಣು ಮತ್ತು ನಗರ ನೀರು ನಿರ್ವಹಣೆಯಂತಹ ಕ್ಷೇತ್ರಗಳು ಸಹಕಾರದ ಕೇಂದ್ರ ಬಿಂದುವಾಗುತ್ತವೆ. ಪರಸ್ಪರ ವ್ಯವಹಾರಕ್ಕೆ ವೇಗ ನೀಡಲು, ಎರಡೂ ದೇಶಗಳು ದ್ವಿಪಕ್ಷೀಯ ಸಮಗ್ರ ಆರ್ಥಿಕ ಸಹಕಾರ ಒಪ್ಪಂದ ಮತ್ತು ಆಸಿಯಾನ್ ಮುಕ್ತ ವ್ಯಾಪಾರ ಒಪ್ಪಂದದ ಕಾಲಮಿತಿಯ ಪರಿಶೀಲನೆಯನ್ನು ಮಾಡಲು ನಿರ್ಧರಿಸಿವೆ ಎಂದರು. ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ, ಭಾರತದ ಜನರ ಬಗ್ಗೆ ಸಹಾನುಭೂತಿ ಮತ್ತು ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಬೆಂಬಲ ನೀಡಿದ್ದಕ್ಕಾಗಿ ಪ್ರಧಾನಿ ವಾಂಗ್ ಮತ್ತು ಸಿಂಗಾಪುರ ಸರ್ಕಾರಕ್ಕೆ ಪ್ರಧಾನಿ ಮೋದಿ ಕೃತಜ್ಞತೆ ಸಲ್ಲಿಸಿದರು. ನಂತರ ಪ್ರಧಾನಿ ನರೇಂದ್ರ ಮೋದಿ ಮತ್ತು ಸಿಂಗಾಪುರ ಪ್ರಧಾನಿ ಲಾರೆನ್ಸ್ ವಾಂಗ್,

ಜೆಎನ್ ಪೋರ್ಟ್ ಪಿಎಸ್‌ಎ ಮುಂಬೈ ಟರ್ಮಿನಲ್‌ನ ಎರಡನೇ ಹಂತವನ್ನು ವರ್ಚುವಲ್ ಆಗಿ ಉದ್ಘಾಟಿಸಿದರು. ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್ ವರ್ಚುವಲ್ ಆಗಿ ಹಾಗೂ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಮತ್ತು ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ರಾಜ್ಯ ಸಚಿವ ಶಾಂತನು ಠಾಕೂರ್ ನವಿ ಮುಂಬೈನಲ್ಲಿ ನಡೆದ ಉದ್ಘಾಟನಾ ಸಮಾರಂಭದಲ್ಲಿ ಹಾಜರಿದ್ದರು.

><><><*><><><

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಪಂಜಾಬ್‌ನ ಅಮೃತಸರ ಮತ್ತು ಗುರುದಾಸಪುರ ಜಿಲ್ಲೆಗಳ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ, ರೈತರು ಸೇರಿದಂತೆ ಪ್ರವಾಹ ಪೀಡಿತ ಜನರೊಂದಿಗೆ ಸಂವಾದ ನಡೆಸಿದರು. ರೈಲ್ವೆ ಮತ್ತು ಆಹಾರ ಸಂಸ್ಕರಣಾ ಕೈಗಾರಿಕೆಗಳ ರಾಜ್ಯ ಸಚಿವ ರವನೀತ್ ಸಿಂಗ್ ಬಿಟ್ಟು ಉಪಸ್ಥಿತರಿದ್ದರು. ಅಮೃತಸರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಶಿವರಾಜ್ ಸಿಂಗ್ ಚೌಹಾಣ್, ಪಂಜಾಬ್ ಪ್ರವಾಹದಿಂದಾಗಿ ಕಠಿಣ ಸಮಯವನ್ನು ಎದುರಿಸುತ್ತಿದೆ. ಇದರಿಂದ ಹಲವಾರು ಹಳ್ಳಿಗಳ ಮೇಲೆ ಪರಿಣಾಮ ಬೀರಿದೆ. ಹೊಲಗಳು ಜಲಾವೃತವಾಗಿವೆ ಮತ್ತು ಸಾಮಾನ್ಯ ಜೀವನವು ಅಸ್ತವ್ಯಸ್ತಗೊಂಡಿದೆ ಎಂದು ಹೇಳಿದರು. ಪರಿಸ್ಥಿತಿಯನ್ನು ಅವಲೋಕಿಸಲು ಪ್ರಧಾನಿ ತಮ್ಮನ್ನು ಕಳುಹಿಸಿದ್ದಾರೆ ಮತ್ತು ಈ ಬಿಕ್ಕಟ್ಟಿನ ಸಮಯದಲ್ಲಿ ಕೇಂದ್ರ ಸರ್ಕಾರ ಪಂಜಾಬ್ ಜನರೊಂದಿಗೆ ಸಂಪೂರ್ಣವಾಗಿ ನಿಂತಿದೆ ಎಂದು ಅವರು ಭರವಸೆ ನೀಡಿದರು. ಕೃಷಿ, ಗ್ರಾಮೀಣಾಭಿವೃದ್ಧಿ, ರಸ್ತೆಗಳು, ಹಣಕಾಸು ಮತ್ತು ಇಂಧನ ವಲಯ ಸೇರಿದಂತೆ ವಿವಿಧ ಇಲಾಖೆಗಳನ್ನು ಒಳಗೊಂಡ ಎರಡು ಕೇಂದ್ರ ತಂಡಗಳು ಪ್ರವಾಹದಿಂದ ಉಂಟಾಗುವ ಪರಿಸ್ಥಿತಿಯನ್ನು ನಿರ್ಣಯಿಸಲು ಪಂಜಾಬ್ ತಲುಪಿವೆ ಮತ್ತು ಕೇಂದ್ರಕ್ಕೆ ವರದಿ ಸಲ್ಲಿಸಲಿವೆ ಎಂದು ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

><><><*><><><

ಜವಾಬ್ದಾರಿಯುತ ನಾಗರಿಕರನ್ನು ಬೆಳೆಸುವಲ್ಲಿ ವಿದ್ಯಾರ್ಥಿಗಳಿಗೆ ಪ್ರಾದೇಶಿಕ ಭಾಷೆಗಳಲ್ಲಿ ಶಿಕ್ಷಣ ನೀಡುವುದು ಪ್ರಮುಖ ಹೆಜ್ಜೆಯಾಗಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ೭ ನೇ ಈ।ಅಅ। ರಸ್ತೆ ಸುರಕ್ಷತಾ ಪ್ರಶಸ್ತಿಗಳು ಮತ್ತು ವಿಚಾರ ಸಂಕಿರಣ ೨೦೨೫ ಉದ್ದೇಶಿಸಿ ಮಾತನಾಡಿದ ಅವರು, ಎಲ್ಲಾ ಪ್ರಾದೇಶಿಕ ಭಾಷೆಗಳಲ್ಲಿ ರಸ್ತೆ ಸುರಕ್ಷತಾ ಪಾಠಗಳನ್ನು ಶಾಲಾ ಮತ್ತು ಕಾಲೇಜು ಪಠ್ಯಕ್ರಮದಲ್ಲಿ ಸಂಯೋಜಿಸಲು ಕೇಂದ್ರ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯವು ಶಿಕ್ಷಣ ಸಚಿವಾಲಯದೊಂದಿಗೆ ಸಹಕರಿಸುತ್ತಿದೆ ಎಂದು ತಿಳಿಸಿದರು. ದೇಶದಲ್ಲಿ ಸಂಭವಿಸುವ ರಸ್ತೆ ಅಪಘಾತ ಸಾವುಗಳಲ್ಲಿ ಶೇಕಡ ೬೬ ರಷ್ಟು ೧೮ ರಿಂದ ೪೫ ವರ್ಷ ವಯಸ್ಸಿನ ವ್ಯಕ್ತಿಗಳನ್ನು ಒಳಗೊಂಡಿವೆ. ಚಾಲಕರ ಆಯಾಸ ಮತ್ತು ಅರೆನಿದ್ರಾವಸ್ಥೆಯಿಂದ ಉಂಟಾಗುವ ಅಪಘಾತಗಳನ್ನು ತಡೆಗಟ್ಟಲು ಸರ್ಕಾರ ನಿದ್ರೆ ಮತ್ತು ಆಯಾಸ ಪತ್ತೆ ಸಾಧನಗಳನ್ನು ಜಾರಿಗೆ ತಂದಿದೆ ಎಂದು ಸಚಿವ ನಿತಿನ್ ಗಡ್ಕರಿ ಹೇಳಿದರು.

><><><*><><><

ಆಗಸ್ಟ್‌ನಲ್ಲಿ ಯುಐಡಿಎಐ ೨೨೧ ಕೋಟಿಗೂ ಹೆಚ್ಚು ಆಧಾರ್ ದೃಢೀಕರಣ ವಹಿವಾಟುಗಳನ್ನು ದಾಖಲಿಸಿದೆ. ಇದು ಭಾರತದ ಡಿಜಿಟಲ್ ಆರ್ಥಿಕತೆಯ ಬೆಳವಣಿಗೆ ಮತ್ತು ಆಧಾರ್‌ನ ಹೆಚ್ಚುತ್ತಿರುವ ಬಳಕೆಯನ್ನು ಪ್ರತಿಬಿಂಬಿಸುತ್ತದೆ. ಆಧಾರ್ ಆಧಾರಿತ ದೃಢೀಕರಣವು ಪರಿಣಾಮಕಾರಿ ಕಲ್ಯಾಣ ವಿತರಣೆಗೆ ಮತ್ತು ಸೇವಾ ಪೂರೈಕೆದಾರರು ನೀಡುವ ವಿವಿಧ ಸೇವೆಗಳನ್ನು ಸ್ವಯಂಪ್ರೇರಣೆಯಿಂದ ಪಡೆಯಲು ಸಹಾಯಕವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ

ತಂತ್ರಜ್ಞಾನ ಸಚಿವಾಲಯ ಹೇಳಿದೆ. ಆಗಸ್ಟ್‌ನಲ್ಲಿ ೧೮.೬ ಕೋಟಿ ಮುಖ ದೃಢೀಕರಣ ವಹಿವಾಟುಗಳು ಪೂರ್ಣಗೊಂಡಿವೆ. ಈ ಕೃತಕ ಬುದ್ಧಿಮತ್ತೆ-ಎಐ ಆಧಾರಿತ ಮುಖ ದೃಢೀಕರಣವು ಬಳಕೆದಾರರಿಗೆ ಫೇಸ್ ಸ್ಕ್ಯಾನ್ ಮೂಲಕ ತಮ್ಮ ಗುರುತನ್ನು ಪರಿಶೀಲಿಸಲು ಅನುವು ಮಾಡಿಕೊಡುತ್ತದೆ. ಭದ್ರತಾ ಮಾನದಂಡಗಳನ್ನು ಕಾಯ್ದುಕೊಳ್ಳುವಾಗ ಅನುಕೂಲವನ್ನು ಖಚಿತಪಡಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ.

><><><*><><><

ದೈನಂದಿನ ಅಗತ್ಯಗಳು, ಔಷಧಗಳು, ಆಹಾರ ಉತ್ಪನ್ನಗಳು, ಜವಳಿ ಮತ್ತು ಪಾದರಕ್ಷೆಗಳ ಸೇರಿದಂತೆ ಬಹುತೇಕ ಎಲ್ಲಾ ವಸ್ತುಗಳ ಮೇಲಿನ ತೆರಿಗೆ ಕಡಿತದಿಂದ ಗ್ರಾಹಕರಿಗೆ ಹೆಚ್ಚಿನ ಲಾಭವಾಗಲಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರು ತೆರಿಗೆ ಕಡಿತದ ಮೂಲಕ ದೀಪಾವಳಿ ಹಬ್ಬದ ದೊಡ್ಡ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

><><><*><><><

ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳು, ಸಮಾಜದ ಪ್ರತಿಯೊಂದು ವರ್ಗಕ್ಕೂ ಪರಿಹಾರವನ್ನು ಒದಗಿಸುತ್ತವೆ ಎಂದು ಬಿಜೆಪಿ ಹೇಳಿದೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ವಕ್ತಾರ ಸಂಬಿತ್ ಪಾತ್ರ, ತೆರಿಗೆ ಕಡಿತದ ನಂತರ ದೇಶದ ಜನರಲ್ಲಿ ಸಂತೋಷದ ವಾತಾವರಣವಿದೆ. ರೈತರು ಸೇರಿದಂತೆ ಎಲ್ಲಾ ವರ್ಗಗಳು ಈ ಸುಧಾರಣೆಗಳಿಂದ ಪ್ರಯೋಜನ ಪಡೆಯುತ್ತವೆ ಎಂದು ಅವರು ಹೇಳಿದರು.

><><><*><><><

ದೇಶ ಎರವಲು ಪಡೆದ ತಂತ್ರಜ್ಞಾನದ ಮೇಲೆ ಬದುಕಲು ಸಾಧ್ಯವಿಲ್ಲ. ಹೀಗಾಗಿ ತಂತ್ರಜ್ಞಾನ ಮಾಲೀಕತ್ವದ ಅಗತ್ಯವನ್ನು ನೀತಿ ಆಯೋಗದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ.ಆರ್. ಸುಬ್ರಹ್ಮಣ್ಯಂ ಒತ್ತಿ ಹೇಳಿದರು. ಗಡಿ ತಂತ್ರಜ್ಞಾನ ಒಳನೋಟಗಳ ಕುರಿತಾದ ತ್ರೈಮಾಸಿಕ ವರದಿ ಬಿಡುಗಡೆಯ ನಂತರ ಮಾತನಾಡಿದ ಅವರು, ಸಿಲಿಕಾನ್ ಮೇಲಿನ ಅವಲಂಬನೆಯನ್ನು ಬದಲಿಸುವ ಮೂಲಕ ಭಾರತವನ್ನು ಅರೆವಾಹಕ ನಾಯಕನನ್ನಾಗಿ ಮಾಡಬಹುದು ಎಂದರು. ಸಂಶೋಧನೆ ಮತ್ತು ಅಭಿವೃದ್ಧಿಯಿಂದ ನಿರ್ಣಾಯಕ ಪೂರೈಕೆ ಸರಪಳಿಯವರೆಗೆ ಭಾರತವು ಸಂಪೂರ್ಣ ೨ಡಿ ಸಾಮಗ್ರಿಗಳ ಪರಿಸರ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದರು.

><><><*><><><

೨೦೨೫ ರ ವಿಶ್ವ ಬಾಕ್ಸಿಂಗ್ ಚಾಂಪಿಯನ್‌ಶಿಪ್‌ಗಳು ಇಂದು ಇಂಗ್ಲೆಂಡ್‌ನ ಲಿವರ್‌ಪೂಲ್‌ನಲ್ಲಿ ಪ್ರಾರಂಭವಾಗಿವೆ. ಭಾರತವು ಚಾಂಪಿಯನ್‌ಶಿಪ್‌ನಲ್ಲಿ ೨೦ ಸದಸ್ಯರ ಬಲಿಷ್ಠ ತಂಡವನ್ನು ಕಣಕ್ಕಿಳಿಸಿದೆ. ಎರಡು ಬಾರಿಯ ವಿಶ್ವ ಚಾಂಪಿಯನ್ ನಿಖತ್ ಜರೀನ್ ಮತ್ತು ಟೋಕಿಯೊ ಒಲಿಂಪಿಕ್ ಕಂಚಿನ ಪದಕ ವಿಜೇತೆ ಲೊವ್ಲಿನಾ ಬೊರ್ಗೋಹೈನ್ ಮತ್ತು ಎರಡು ಬಾರಿಯ ಏಷ್ಯನ್ ಚಾಂಪಿಯನ್ ಪೂಜಾ ರಾಣಿ ಮಹಿಳಾ ತಂಡದ ಅನುಭವಿ ಕೇಂದ್ರವಾಗಿದ್ದಾರೆ. ಭಾರತೀಯ ಪುರುಷರ ಬಾಕ್ಸಿಂಗ್ ತಂಡವನ್ನು ೨೦೨೧ ರ ವಿಶ್ವ ಯುವ ಚಾಂಪಿಯನ್ ಸಚಿನ್ ಸಿವಾಚ್, ಹರ್ಷ್ ಚೌಧರಿ ಮತ್ತು ಸುಮಿತ್ ಕುಂಡು ಮುನ್ನಡೆಸುತ್ತಿದ್ದಾರೆ.

ಅವರೊಂದಿಗೆ ಜಾದುಮಣಿ ಸಿಂಗ್ ಮಂಡೇಂಗ್‌ಬಾಮ್, ಹಿತೇಶ್ ಗುಲಿಯಾ ಮತ್ತು ಅಭಿನಾಶ್ ಜಮ್ವಾಲ್ ಅವರಂತಹ ಭರವಸೆಯ ಕುಸ್ತಿಪಟುಗಳಿದ್ದಾರೆ.  ಏತನ್ಮಧ್ಯೆ, ಗಡುವು ಮುಗಿದರೂ ಲಿಂಗ ಪರೀಕ್ಷೆಯ ಫಲಿತಾಂಶಗಳನ್ನು ಹಂಚಿಕೊಳ್ಳಲು ವಿಫಲಗೊಂಡ ಕಾರಣ ಫ್ರಾನ್ಸ್ ಮಹಿಳಾ ತಂಡವನ್ನು ಲಿವರ್‌ಪೂಲ್‌ನಲ್ಲಿ ನಡೆಯಲಿರುವ ಬಾಕ್ಸಿಂಗ್ ವಿಶ್ವ ಚಾಂಪಿಯನ್‌ಶಿಪ್‌ನಿಂದ ನಿಷೇಧಿಸಲಾಗಿದೆ.

><><><*><><><